ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

"ಕನ್ನಡ ಕಾಯಕ ವರ್ಷ ೨೦೨೦-೨೧"

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/10/ಸುತ್ತೋಲೆ/2020-21

ದಿನಾಂಕ: 23.11.2021.

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಆಯೋಜಿಸುತ್ತಿರುವ 2021-22ನೇ ಸಾಲಿನ "ಅಂತರ ವಿಶ್ವವಿದ್ಯಾಲಯ ಉಪನ್ಯಾಸ ಸ್ಪರ್ಧೆ" ಯಲ್ಲಿ ಪದವಿ ವಿಜ್ಞಾನ ವಿದ್ಯಾರ್ಥಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಬೆಂಗಳೂರು, ರವರ ಪತ್ರ ಸಂಖ್ಯೆ: 8.4.3/IULC/21-22/1339 dt: 13.10.2021.

* * * * * *

ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಕ್ರಿಯಾಶೀಲತೆ ಹಾಗೂ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ಉದ್ದೇಶದಿಂದ ರಾಜ್ಯದ ಪದವಿ ಕಾಲೇಜುಗಳ ವಿಜ್ಞಾನ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು 2020-21ನೇ ಸಾಲಿನ "ಅಂತರ ವಿಶ್ವವಿದ್ಯಾಲಯ ಉಪನ್ಯಾಸ ಸ್ಪರ್ಧೆ"ಯನ್ನು ಆಯೋಜಿಸಿದೆ. ಸದರಿ ವಿಜ್ಞಾನ ಕಾರ್ಯಕ್ರಮದಲ್ಲಿ ಭಾಗವಹಿಸುವ ಕುರಿತ ಕರಪತ್ರವನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದ್ದು, ಇದನ್ನು ಕಾಲೇಜಿನ ಪ್ರಕಟಣಾ ಫಲಕದಲ್ಲಿ ಪ್ರದರ್ಶಿಸಿ ಎಲ್ಲಾ ವಿದ್ಯಾರ್ಥಿಗಳ ಹಾಗೂ ಉಪನ್ಯಾಸಕರ ಗಮನಕ್ಕೆ ತಂದು ಸದರಿ ಕರಪತ್ರದಲ್ಲಿ ತಿಳಿಸಿರುವಂತೆ ಆಸಕ್ತ ವಿದ್ಯಾರ್ಥಿಗಳು ಸದರಿ ಉಪನ್ಯಾಸ ಸ್ಪರ್ಧೆಯಲ್ಲಿ ಭಾಗವಹಿಸಲು ಅನುಕೂಲಕರವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಲು ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ವಿಭಾಗ ಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಮತ್ತು ಮಾರ್ಗದರ್ಶಿ ಉಪನ್ಯಾಸಕರಿಗೆ ಪರಿಷತ್ತು ಪ್ರಶಸ್ತಿ ಪತ್ರ / ಅಭಿನಂದನಾ ಪತ್ರ, ಊಟ ಮತ್ತು ಕಾಫಿಯ ವ್ಯವಸ್ಥೆಯನ್ನು ಹಾಗೂ ರಾಜ್ಯ ಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಮತ್ತು ಮಾರ್ಗದರ್ಶಿ ಉಪನ್ಯಾಸಕರಿಗೆ ಮೇಲೆ ತಿಳಿಸಿರುವುದರೊಂದಿಗೆ ವಸತಿ ವ್ಯವಸ್ಥೆಯನ್ನು ಒದಗಿಸುತ್ತದೆ.

ಕೋವಿಡ್-19ರ ಮಾರ್ಗಸೂಚಿಗಳನ್ನು ಅನುಸರಿಸಿ ಸಾಮಾಜಿಕ ಅಂತರವನ್ನು ಕಾಪಾಡಿಕೊಂಡು ಸ್ಪರ್ಧೆಯಲ್ಲಿ ಭಾಗವಹಿಸಲು ಅಗತ್ಯ ಕ್ರಮಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಿದೆ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.

ಪ್ರತಿಯನ್ನು:

1. ಅಧ್ಯಕ್ಷರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ವಿಜ್ಞಾನ ಭವನ, ನಂ.24/2 & 24/3, 21ನೇ ಮುಖ್ಯರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು - 560 070.

# ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರದ ನೆರವಿನ ಸಂಸ್ಥೆ

'ವಿಜ್ಞಾನ ಭವನ', ನಂ.24/2, 21ನೇ ಮುಖ್ಯ ರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು – 560 070.

ದೂರವಾಣಿ : 080-26718939, ಮೊ : 9483549159 ಇ-ಮೇಲ್ : krvp.info@gmail.com ವೆಬ್‌ಸೈಟ್ : www.krvp.in

ಮಹಾಪೋಷಕರು : 'ಭಾರತ ರತ್ನ' ಪ್ರೊ|| ಸಿ.ಎನ್.ಆರ್. ರಾವ್ FRS

ರಾಷ್ಟ್ರೀಯ ಸಂಶೋಧನಾ ಪ್ರಾಧ್ಯಾಪಕರು ಹಾಗೂ ಪ್ರಧಾನ ಮಂತ್ರಿಗಳ ವೈಜ್ಞಾನಿಕ ಸಲಹಾ ಮಂಡಳಿಯ ಅಧ್ಯಕ್ಷರು

| ಗಿರೀಶ್ ವಿ. ಕಡ್ಲೇವಾಡ | ಬಿ. ದೊಡ್ಡಬಸಪ್ಪ<br>ಹೆಚ್.ಬಿ. ಮನ್ಸೂರ್ | ಸಿ. ಕೃಷ್ಣೇಗೌಡ | ಶ್ರೀನಾಥ್ ಬಿ.ಎಸ್. | ಈ. ಬಸವರಾಜು |
|---|---|---|---|---|
| ಅಧ್ಯಕ್ಷರು | ಉಪಾಧ್ಯಕ್ಷರು | ಗೌರವ ಕಾರ್ಯದರ್ಶಿ | ಜಂಟಿ ಕಾರ್ಯದರ್ಶಿ | ಖಜಾಂಚಿ |

ಕರಾವಿಪ ಸಂಖ್ಯೆ: 8.4.3/IULC/21-22/1339 13-10-2021

ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ
ಶೇಷಾದ್ರಿ ರಸ್ತೆ, ಬೆಂಗಳೂರು

ಮಾನ್ಯರೆ,

ವಿಷಯ: ಪದವಿ ವಿಜ್ಞಾನ ವಿದ್ಯಾರ್ಥಿಗಳಿಗಾಗಿ ಕರಾವಿಪ ಆಯೋಜಿಸುತ್ತಿರುವ 2020-21 ನೇ ಅಂತರ ವಿಶ್ವವಿದ್ಯಾಲಯ ಕನ್ನಡ ವಿಜ್ಞಾನ ಉಪನ್ಯಾಸ ಸ್ಪರ್ಧೆ ಸಂಬಂಧ ಸುತ್ತೋಲೆಯನ್ನು ಹೊರಡಿಸುವ ಕುರಿತು

*****

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು (ಕರಾವಿಪ) ಕಳೆದ 12 ವರ್ಷಗಳಿಂದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನೆರವಿನೊಂದಿಗೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಪದವಿ ವಿಜ್ಞಾನ ವಿದ್ಯಾರ್ಥಿಗಳಿಗಾಗಿ ರಾಜ್ಯ ಮಟ್ಟದ "ಅಂತರ ವಿಶ್ವವಿದ್ಯಾಲಯ ಉಪನ್ಯಾಸ ಸ್ಪರ್ಧೆ" ಯೋಜನೆಯನ್ನು ಆಯೋಜಿಸುತ್ತಿರುವುದು ತಮಗೆ ತಿಳಿದ ವಿಷಯವಾಗಿದೆ.

ಪ್ರಸಕ್ತ ಸಾಲಿನಲ್ಲಿ (2021-22) ವಿಜ್ಞಾನ ಪರಿಷತ್ತು ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳಲ್ಲಿ ಮೇಲಿನ ಕಾರ್ಯಕ್ರಮವನ್ನು ವಿಶ್ವವಿದ್ಯಾಲಯ ಮತ್ತು ರಾಜ್ಯಮಟ್ಟದ ಅಂತರ ವಿಶ್ವವಿದ್ಯಾಲಯ ಮಟ್ಟದಲ್ಲಿ ಆಯೋಜಿಸಲು ಉದ್ದೇಶಿಸಿದೆ. ಪ್ರತಿ ಜಿಲ್ಲೆಯಲ್ಲಿ ಪದವಿ ವಿಜ್ಞಾನ ವಿದ್ಯಾರ್ಥಿಗಳು ಭಾಗವಹಿಸಲಿದ್ದು ಯಾವುದೇ ವಿದ್ಯಾರ್ಥಿಯು ವಿಜ್ಞಾನಕ್ಕೆ ಸಂಬಂಧಿಸಿದಂತೆ ಯಾವ ವಿಭಾಗದಲ್ಲಾದರೂ ವಿಷಯವನ್ನು ಆಯ್ಕೆ ಮಾಡಿ 10 ನಿಮಿಷಗಳ ಕಾಲ ಪವರ್ ಪಾಯಿಂಟ್/ ಒ.ಹೆಚ್.ಪಿ. / ಬ್ಲಾಕ್ ಬೋರ್ಡ್/ ಚಾರ್ಟ್‌ಗಳನ್ನು ಉಪಯೋಗಿಸಿ ಕನ್ನಡದಲ್ಲಿ ಉಪನ್ಯಾಸ ನೀಡುವುದಲ್ಲದೆ, ನಂತರದಲ್ಲಿ 2 ಅಥವಾ 3 ನಿಮಿಷಗಳ ಕಾಲ ತೀರ್ಪುಗಾರರೊಂದಿಗೆ ನೇರ ಸಂವಾದದಲ್ಲಿ ಭಾಗವಹಿಸಬೇಕಾಗುತ್ತದೆ.

ವಿಶ್ವವಿದ್ಯಾಲಯ ಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ವಿಜ್ಞಾನ ಪರಿಷತ್ತು ಪ್ರಶಸ್ತಿ ಪತ್ರ/ಅಭಿನಂದನಾ ಪತ್ರ, ಊಟದ ವ್ಯವಸ್ಥೆಯನ್ನು ಹಾಗೂ ರಾಜ್ಯ ಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಮೇಲೆ ತಿಳಿಸಿರುವುದರೊಂದಿಗೆ ವಸತಿ ವ್ಯವಸ್ಥೆಯನ್ನು ಒದಗಿಸುತ್ತದೆ ವಿಶ್ವವಿದ್ಯಾಲಯ ಮಟ್ಟದ ಸ್ಪರ್ಧೆಯನ್ನು ಆಯಾ ಕರಾವಿಪ ಜಿಲ್ಲಾ ಸಮಿತಿಯು ನಿರ್ವಹಿಸುವುದು. ವಿಶ್ವವಿದ್ಯಾಲಯ ಮಟ್ಟದಲ್ಲಿ ಒಂದು ಕಾಲೇಜಿನಿಂದ 4 ವಿದ್ಯಾರ್ಥಿಗಳು ವಿಷಯಾನುಸಾರ ಭಾಗವಹಿಸಬಹುದು (ಪಿ.ಸಿ.ಎಂ.ಬಿ. – ವಿ: ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರ).

ಮೇಲಿನ ಅಂಶಗಳನ್ನು ಪರಿಗಣಿಸಿ ವಿಶ್ವವಿದ್ಯಾಲಯ ಹಾಗೂ ರಾಜ್ಯ ಮಟ್ಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳ ಮತ್ತು ಮಾರ್ಗದರ್ಶಿ ಉಪನ್ಯಾಸಕರಿಗೆ ಆಯಾ ಕಾಲೇಜಿನಲ್ಲಿ ಲಭ್ಯವಿರುವ ಸಂಚಿತ ನಿಧಿಯಿಂದ ಪ್ರಯಾಣ ಭತ್ಯೆಯನ್ನು ಭರಿಸುವಂತೆ ರಾಜ್ಯದ ಎಲ್ಲ ಪದವಿ ವಿಜ್ಞಾನ ಕಾಲೇಜಿನ ಪ್ರಾಂಶುಪಾಲರಿಗೆ ಆದೇಶ ಜಾರಿಮಾಡಲು ಈ ಮೂಲಕ ತಮ್ಮಲ್ಲಿ ವಿನಂತಿಸಿದೆ.

ಈ ಕಾರ್ಯಕ್ರಮವನ್ನು ಅಕ್ಟೋಬರ್ ಮತ್ತು ನವೆಂಬರ್ ತಿಂಗಳಿನಲ್ಲಿ ಆಯೋಜಿಸಲಾಗುವುದು. ಕೋವಿಡ್ 19 ರ ಹಿನ್ನೆಲೆಯಲ್ಲಿ ಎಲ್ಲಾ ರೀತಿಯ ಮುಂಜಾಗ್ರತ ಕ್ರಮಗಳನ್ನು ಅನುಸರಿಸಿ, ಕಾರ್ಯಕ್ರಮವನ್ನು ಆಯೋಜಿಸಲಾಗುವುದು.

ವಂದನೆಗಳು,

ಇತಿ ವಿಶ್ವಾಸಿ,

(ಸಿ. ಕೃಷ್ಣೇಗೌಡ)
ಗೌರವ ಕಾರ್ಯದರ್ಶಿ.

ಲಗತ್ತು: ಕಳೆದ ಸಾಲಿನ ಕರಪತ್ರ ಮತ್ತು ಸುತ್ತೋಲೆ